ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 30 ನೇ ಸೆಪ್ಟೆಂಬರ್, 2020

ರಾಣಿ ಚೆನ್ನಮ್ಮ ವಿಶ್ವವಿದ್ಯಾಲಯ, ಬೆಳಗಾವಿ ಸ್ಥಳದ ಕುರಿತು

ಡಾ|| ತಳವಾರ್ ಸಾಬಣ್ಣ(ನಾಮನಿರ್ದೇಶನ ಹೊಂದಿದವರು) -

1115 (1123) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ರಾಣಿ ಚೆನ್ನಮ್ಮ ವಿಶ್ವವಿದ್ಯಾಲಯವನ್ನು 2010ರಲ್ಲಿ ಕರ್ನಾಟಕ ವಿಶ್ವವಿದ್ಯಾಲಯದಿಂದ ಪ್ರತ್ಯೇಕಿಸಿ ಸ್ವತಂತ್ರ ವಿಶ್ವವಿದ್ಯಾಲಯವೆಂದು ಸರ್ಕಾರ ಘೋಷಿಸಿದ್ದು, ಈ ವಿಶ್ವವಿದ್ಯಾಲಯ ಅಸ್ತಿತ್ವದಲ್ಲಿರುವ ಭೂತರಾಮನಹಟ್ಟಿಯ 176 ಎಕರೆ ಜಮೀನು ಕಾಯ್ದಿರಿಸಿದ ಅರಣ್ಯ (Reserve Forest) ಎಂದು ಕೇಂದ್ರ ಅರಣ್ಯ ಇಲಾಖೆ ಗುರುತಿಸಿರುವುದು ನಿಜವೇ; ಇದರಿಂದಾಗಿ ಅಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಭವಿಷ್ಯ ಮತ್ತು ಕಟ್ಟಡ ನಿರ್ಮಾಣ ಚಟುವಟಿಕೆಗಳು ಅನಿಶ್ಚಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ವಿಶ್ವವಿದ್ಯಾಲಯವು ಹಿರೇಬಾಗೇವಾಡಿ ಗ್ರಾಮದ ಹತ್ತಿರ 100 ಎಕರೆಯಷ್ಟು ಜಾಗ ಗುರುತಿಸಿದ್ದು ಇದನ್ನು ವಿಶ್ವವಿದ್ಯಾಲಯಕ್ಕೆ ವರ್ಗಾಯಿಸಲು ಸರ್ಕಾರವು ಕೈಗೊಂಡ ಕ್ರಮಗಳೇನು?